ಪತ್ರಿಕೆ ಹೆಸರು : NAME OF THE NEWS PAPER
ದಿನಾಂಕ : DATE: 05/03/2020

# ಕಾಗೇರಿ ಭಾಷಣದಲ್ಲಿ ಕಾಂಗ್ರೆಸಿಗರನ್ನು ಮರೆತಿದ್ದಾರೆ

5/3/2020

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಒಬ್ಬರೇ ಸಂವಿಧಾನ ಕರಡು ಸಿದ್ಧಪಡಿಸಿದರು. ದಮನಿತರು, ತುಳಿತಕ್ಕೆ ಒಳಗಾದವರಿಗೆ ನೆರವಾಗಬೇಕು. ಅವರನ್ನು ಮೇಲೆತ್ತಬೇಕು ಎಂಬುದು ಅಂಬೇಡ್ಕರ್ ಅವರ ಉದ್ದೇಶವಾಗಿತ್ತು. ಸಂವಿಧಾನ ರಚನೆಯ ಸಕಲ ಗೌರವವೂ ಡಾ.ಬಿ.ಆರ್.ಅಂಬೇಡ್ಕರ್ ಅವರೊಬ್ಬರಿಗೇ ಸಲ್ಲಬೇಕು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳುವ ಮೂಲಕ ಸಂವಿಧಾನ ಮೂಲ ರಚನೆ ಯಾರು ಮಾಡಿದರು ಎಂಬ ವಿಷಯದಲ್ಲಿ ನಡೆಯುತ್ತಿದ್ದ ಚರ್ಚೆಗೆ ತೆರೆ ಎಳೆದ ಪ್ರಸಂಗ ವಿಧಾನಸಭೆಯಲ್ಲಿ ನಡೆಯಿತು.

ಸಂವಿಧಾನ ಕುರಿತ ವಿಶೇಷ ಚರ್ಚೆಯ ಎರಡನೇ ದಿನದ ಅಧಿವೇಶನದಲ್ಲಿ ಸಂವಿಧಾನ ರಚನೆ, ಅದರ ಉದ್ದೇಶ, ಧ್ಯೇಯೋದ್ದೇಶಗಳ ಬಗ್ಗೆ ವಿಸ್ತೃತ ಚರ್ಚೆ ನಡೆಯಿತು. ಆರಂಭದಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಮಾತನಾಡಿ, ಸಂವಿಧಾನ ರಚನೆಗೆ ನಮ್ಮ ದೇಶದ ಉಪನಿಷತ್‌ಗಳು, ವೇದಗಳು ಪ್ರೇರಣೆಯಾಗಿವೆ. ಆಡಳಿತ ಹೇಗೆ ನಡೆಸಬೇಕು ಎಂಬುದನ್ನು ವೇದಗಳಲ್ಲಿ ತಿಳಿಸಲಾಗಿದೆ. ನಮ್ಮ ದೇಶದ ಸಂವಿಧಾನ ಅತ್ಯುನ್ನತವಾಗಿದೆ ಎಂದರು.



ಕಾಂಗ್ರೆಸ್ ನಾಯಕ ಎಚ್.ಕೆ.ಪಾಟೀಲ್ ಮಾತನಾಡಿ, ಸ್ಪೀಕರ್ ಅವರು ಸಂವಿಧಾನ ಕುರಿತು ಸುದೀರ್ಘ ಭಾಷಣ ಮಾಡಿದ್ದಾರೆ. ಆದರೆ ಅವರ ಭಾಷಣದ 7ನೇ ಪುಟದಲ್ಲಿ ಮಂಗಳೂರಿನವರಾದ ಬಿ.ಎನ್. ರಾವ್ ಅವರ ಕೊಡುಗೆ ಅಪಾರವಾದುದು. ಅವರು ಭಾರತ ಸಂವಿಧಾನ ರಚನಾ ಸಭೆಯ ಸಲಹೆಗಾರರಾಗಿ ಕಾರ್ಯನಿರ್ವಹಿಸಿದರು ಹಾಗೂ ಅವರು ರಚಿಸಿದ ಸಂವಿಧಾನ ಮೂಲ ಕರಡು ಪ್ರತಿಯನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರ ನೇತೃತ್ವದಲ್ಲಿ ರಚಿಸಲಾದ ಸಂವಿಧಾನದ ಕರಡು ಸಮಿತಿಗೆ ಸಲ್ಲಿಸಲಾಗಿತ್ತು. ಈ ಮೂಲ ಕರಡನ್ನು ರಚನಾ ಸಭೆಯಲ್ಲಿ ಚರ್ಚಿಸಿ ಡಾ.ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ಹಲವಾರು ಮಾರ್ಪಾಡುಗಳನ್ನು ಮಾಡಿ ಭಾರತೀಯ ಸರ್ವತೋಮುಖ ಅಭಿವೃದ್ಧಿಗಾಗಿ ಸಮಗ್ರವಾದ ಹಾಗೂ ಸಮರ್ಥವಾದ ಸಂವಿಧಾನವನ್ನು ರಚಿಸಿದ್ದಾರೆ ಎಂದು ಹೇಳಲಾಗಿದೆ. ಆದರೆ ಇದು ಸರಿಯಲ್ಲ, ಡಾ.ಬಿ.ಆರ್ ಅಂಬೇಡ್ಕರ್ ಅವರು ಸಂವಿಧಾನವನ್ನು ರಚಿಸಿದ್ದರು. ಯಾವುದೇ ಮೂಲ ಕರಡು ಇರಲಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಸ್ಪೀಕರ್ ಅವರು ಸಂವಿಧಾನದ ವಿಷಯದ ಕುರಿತು ಭಾಷಣ ಮಾಡುವಾಗ ಕೆಲವು ಪ್ರಮುಖ ಅಂಶಗಳನ್ನು ಕೈಬಿಟ್ಟಿದ್ದಾರೆ. ಕಾಂಗ್ರೆಸ್, ಸ್ವಾತಂತ್ರ್ಯ ಚಳವಳಿ, ಸ್ವಾತಂತ್ರ್ಯ ಹೋರಾಟಗಾರರನ್ನು ಭಾಷಣದಲ್ಲಿ ಪ್ರಸ್ತಾಪಿಸಿಲ್ಲ. ಸ್ಪೀಕರ್ ಅವರ ಪೂರ್ವಾಗ್ರಹದಿಂದ ಪ್ರಭಾವಿತಗೊಂಡಿರುವುದು ಭಾಷಣದಲ್ಲಿ ಸ್ಪಷ್ಟಗೊಂಡಿದೆ ಎಂದು ಆಕ್ಷೇಪಿಸಿದರು.

## ತಪ್ಪಾಗಿದ್ದರೆ ತಿಳಿಸಿ, ಸರಿಪಡಿಸಿಕೊಳ್ಳುವೆ

ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಉದ್ದೇಶಪೂರ್ವಕವಾಗಿ ಯಾವುದೇ ಅಂಶಗಳನ್ನು ಕೈಬಿಟ್ಟಿಲ್ಲ. ಆದರೆ ಸ್ಥಳದ ಅಭಾವದಿಂದ ಕೆಲವು ಅಂಶಗಳು ಕೈಬಿಟ್ಟಿರಬಹುದು. ತಪ್ಪಾಗಿದ್ದರೆ ತಿಳಿಸಿ, ಸರಿಪಡಿಸಿಕೊಳ್ಳಲು ಸಿದ್ಧನಿದ್ದೇನೆ ಎಂದು ಸಮಜಾಯಿಷಿ ನೀಡಿದರು. ಇತಿಹಾಸ ತಿರುಚುವ ಪ್ರಯತ್ನವನ್ನು ಯಾರೂ ಮಾಡಬಾರದು. ನಮ್ಮ ಮುಂದಿನ ಪೀಳಿಗೆ ಇದನ್ನೇ ಇತಿಹಾಸ ಎಂದು ತಿಳಿದುಕೊಳ್ಳಬಾರದು, ಆದ್ದರಿಂದ ಈ ವಿಷಯವನ್ನು ಪ್ರಸ್ತಾಪಿಸಿದ್ದೇನೆ ಎಂದು ಎಚ್.ಕೆ.ಪಾಟೀಲ್ ಸ್ಪಷ್ಟಪಡಿಸಿದರು. ಈ ವಿಷಯ ವಿವಾದಕ್ಕೆ ಕಾರಣವಾಗಬಹುದು ಎಂಬ ಆತಂಕದಿಂದ ಎದ್ದು ನಿಂತ ಬಿ.ಎಸ್.ಯಡಿಯೂರಪ್ಪ, ಸಂವಿಧಾನ ರಚನೆಯ ಸಕಲ ಗೌರವವೂ ಅಂಬೇಡ್ಕರ್ ಅವರೊಬ್ಬರಿಗೇ ಸಲ್ಲಬೇಕು ಎಂದು ಹೇಳುವ ಮೂಲಕ ವಿವಾದವಾಗದಂತೆ ನೋಡಿಕೊಂಡು ಜಾಣಾಕ್ಷತನ ಮೆರೆದರು.

## ವಸತಿ ಯೋಜನೆಯಲ್ಲಿನ ಭ್ರಷ್ಟಾಚಾರ ತಡೆಗೆ ಕ್ರಮ

ವಸತಿ ಹಂಚಿಕೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ತಡೆಯುವುದಕ್ಕಾಗಿ ಗ್ರಾಪಂ ಅಧ್ಯಕ್ಷರಿಗಿರುವ ಅಧಿಕಾರವನ್ನು ಮೊಟಕುಗೊಳಿಸಲಾಗುವುದೆಂದು ವಸತಿ ಸಚಿವ ಸೋಮಣ್ಣ ಹೇಳಿದರು.

ವಿಧಾನಪರಿಷತ್‌ನಲ್ಲಿ ಕೆ.ಎ. ತಿಪ್ಪೇಸ್ವಾಮಿರವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದ ಅರ್ಹ ಪ್ರತಿಯೊಬ್ಬ ಫಲಾನುಭವಿಗೂ ವಸತಿ ಕಲ್ಪಿಸುವುದು ಸರಕಾರದ ಜವಾಬ್ದಾರಿ. ಆದರೆ, ಪಂಚಾಯತ್ ಹಂತದಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದರಿಂದ ಇದು ಸಾಧ್ಯವಾಗುತ್ತಿಲ್ಲ. ಈ ಹಂತದಲ್ಲಿರುವ ಅಧಿಕಾರವನ್ನು ಮೇಲ್ ಹಂತಕ್ಕೆ ತೆಗೆದುಕೊಂಡು ಹೋಗುವುದರ ಕುರಿತು ಕಾಯಿದೆ ರೂಪಿಸಬೇಕಾಗಿದೆ ಎಂದರು.

ಇದಕ್ಕೆ ವಿಧಾನ ಪರಿಷತ್‌ಗೆ ಸ್ಥಳೀಯ ಆಡಳಿತ ಸಂಸ್ಥೆಗಳಿಂದ ಆಯ್ಕೆಯಾಗಿರುವ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿ, ಭ್ರಷ್ಟಾಚಾರ ನಡೆಸುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಆದರೆ, ಅದರ ನೆಪದಲ್ಲಿ ಗ್ರಾಮ ಪಂಚಾಯತ್‌ಗಳಿಗಿರುವ ಅಧಿಕಾರವನ್ನು ಮೊಟಕುಗೊಳಿಸಬಾರದೆಂದು ತಿಳಿಸಿದರು.

ಈ ವೇಳೆ ಜೆಡಿಎಸ್ ಸದಸ್ಯ ಬೋಜೇಗೌಡ ಮಾತನಾಡಿ, ವಸತಿ ಫಲಾನುಭವಿಗಳನ್ನು ಗುರುತಿಸುವಲ್ಲಿ ಭ್ರಷ್ಟಾಚಾರ ನಡೆಯುತ್ತಿದ್ದು, ಅಧಿಕಾರಿಗಳ ಪಾಲು ದೊಡ್ಡದಿದೆ. ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಆದರೆ, ಗ್ರಾಮ ಪಂಚಾಯತಿಗಳಿಗಿರುವ ಅಧಿಕಾರವನ್ನು ಯಾವುದೇ ಕಾರಣಕ್ಕೂ ಮೊಟಕುಗೊಳಿಸಬಾರದು. ಈ ಬಗ್ಗೆ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾಗಿರುವ ಸಭಾ ನಾಯಕ ಶ್ರೀನಿವಾಸ ಪೂಜಾರಿ ಧ್ವನಿಗೂಡಿಸಬೇಕೆಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಭಾ ನಾಯಕ ಶ್ರೀನಿವಾಸ ಪೂಜಾರಿ, ಭ್ರಷ್ಟಾಚಾರ ತಡೆಯುವಲ್ಲಿ ವಸತಿ ಸಚಿವರು ಹಾಗೂ ಬಿ.ಎಸ್.ಯಡಿಯೂರಪ್ಪ ಯಾವ ಕ್ರಮಗಳನ್ನು ಕೈಗೊಳ್ಳಲಿದ್ದಾರೆ ಎಂಬುದು [illegible]ಕಾಗಿದೆ. ಹೀಗಾಗಿ ಈ ವಿಷಯದ ಕುರಿತು ಸದನದಲ್ಲಿ ಅರ್ಧ ಗಂಟೆ ಚರ್ಚೆಗೆ ಅವಕಾಶ ಕೊಡಬೇಕೆಂದು ಮನವಿ ಮಾಡಿದರು.